ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು):

ಅ) ರೋಣ ತಾಲ್ಲೂಕಿನ ಸಾರಾಯಿ ಮಾರಾಟದ ಗುತ್ತಿಗೆಯನ್ನು ಶ್ರೀ ಆರ್.ಹರಿಶ್ಚಂದ್ರ, ಮ್ಯಾನೇಜಿಂಗ್ ಪಾರ್ಟ್‌ನರ್, ಮೇಃ ಡಿ. ದಾಸಪ್ಪ, ಸುಭೇದಾರ್ ಛತ್ರಂ ರಸ್ತೆ, ಬೆಂಗಳೂರು ಇವರಿಗೆ ನೀಡಲಾಗಿದೆ.

ಆ) ಮಾಸಿಕ ರೂ. 15,74,000-00.

ಇ) 74 ಸಾರಾಯಿ ಅಂಗಡಿಗಳು.

ಈ) ಯಾವುದೂ ಇಲ್ಲ.

ಉ) ಇಲ್ಲ.

ಊ) ಉದ್ಭವಿಸುವುದಿಲ್ಲ.

4804(5513) ಕಳಕಪ್ಪ ಗುರುಶಾಂತಪ್ಪ ಬಂಡಿ(ರೋಣ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರೋಣ ತಾಲ್ಲೂಕಿನ ರೋಣ ಪಟ್ಟಣದಲ್ಲಿ ಸರ್ಕಾರಿ ರಸ್ತೆಗಳನ್ನು ಅನಧಿಕೃತವಾಗಿ ಒತ್ತುವರಿ ಮಾಡಿ ಕಟ್ಟಡಗಳನ್ನು ಕಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಯಾವ ಪ್ರದೇಶದಲ್ಲಿ ರಸ್ತೆಗಳನ್ನು ಒತ್ತುವರಿ ಮಾಡಿ ಕಟ್ಟಡ ನಿರ್ಮಿಸಲಾಗಿದೆ (ವಿವರ ನೀಡುವುದು);

ಇ) ಹಾಗಿದ್ದಲ್ಲಿ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ರೋಣ ತಾಲ್ಲೂಕಿನ ರೋಣ ಪಟ್ಟಣದಲ್ಲಿ ಸರ್ಕಾರಿ ರಸ್ತೆಗಳನ್ನು ಅನಧಿಕೃತವಾಗಿ ಒತ್ತುವರಿ ಮಾಡಿ ಕಟ್ಟಡಗಳನ್ನು ಕಟ್ಟಿರುವದು ಯಾವುದೇ ಪ್ರಕರಣಗಳು ಇರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

4805(5325) ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ): ಮಾನ್ಯ ಅರಣ್ಯ,ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರಿನ ಬನ್ನೇರು ಘಟ್ಟ ರಾಷ್ಟ್ರೀಯ ಉದ್ಯಾನವನ ಬಳಿ ವಿದ್ಯುತ್ ತಂತಿ ಸ್ಪರ್ಶದಿಂದ ಆನೆ ಸತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;